**ಕರ್ನಾಟಕ ಸರ್ಕಾರ**

**ಸಂಖ್ಯೆ:** ಪಪೂಶಿಇ/ಆವಿಎ/ವಿನಿ-5/ಉ-ವರ್ಗ/2022-23.

ನಿರ್ದೇಶಕರ ಕಚೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಅಡ್ಡರಸ್ತೆ, ಮಲ್ಲೇಶ್ವರಂ,
ಬೆಂಗಳೂರು-56 0012
ದಿನಾಂಕ೨೦-07-2022

## ಜ್ಞಾಪನ

**ವಿಷಯ**:- 2022-23ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ **ಸಾಮಾನ್ಯ ಕೋರಿಕೆ ವರ್ಗಾವಣೆ** ಕೌನ್ಸಲಿಂಗ್ ನಡೆಸುವ ಬಗ್ಗೆ.

**ಉಲ್ಲೇಖ**:-

1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 12 ಶಾಸನ 2020, ದಿನಾಂಕ: 27-03-2020.
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 47 ಶಾಸನ 2021, ದಿನಾಂಕ: 18-01-2022.
3. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಪಿ 32 ಟಿಪಿಯು 2021, ದಿನಾಂಕ: 12-05-2022.
4. ಈ ಕಚೇರಿ ಸಮಸಂಖ್ಯೆ ವರ್ಗಾವಣಾ ಮಾರ್ಗಸೂಚಿ ದಿನಾಂಕ:18-05-2022.

* * *

ಉಲ್ಲೇಖ-1 ರಿಂದ 4ರ ವರೆಗಿನ ಆದೇಶಗಳನ್ವಯ 2022-23ನೇ ಶೈಕ್ಷಣಿಕ ಸಾಲಿನಲ್ಲಿ, ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಸಾಮಾನ್ಯ ಕೋರಿಕೆ ವರ್ಗಾವಣೆ ಕೌನ್ಸಲಿಂಗ್ ನಡೆಸಲು ಅವಕಾಶ ಕಲ್ಪಿಸಲಾಗಿದೆ. ವರ್ಗಾವಣಾ ಮಾರ್ಗಸೂಚಿಯನ್ವಯ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಿವಿಧ ವಿಷಯಗಳ ಉಪನ್ಯಾಸಕರು ಆನ್-ಲೈನ್ ಅರ್ಜಿಯನ್ನು ಸಲ್ಲಿಸಿರುತ್ತಾರೆ. ವರ್ಗಾವಣೆ ಬಯಸಿ ಒಟ್ಟು 3072 ಆನ್-ಲೈನ್ ಅರ್ಜಿಯನ್ನು ಸಲ್ಲಿಸಲಾಗಿದ್ದು, ಈ ಪೈಕಿ 377 ಉಪನ್ಯಾಸಕರ ಆನ್-ಲೈನ್ ಅರ್ಜಿಗಳು ಅಪೂರ್ಣ ದಾಖಲೆಗಳಿಂದ ಕೂಡಿರುತ್ತದೆ. ಆದ್ದರಿಂದ, ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರುಗಳಿಗೆ ಆಕ್ಷೇಪಣೆಗಳನ್ನು ಸರಿಪಡಿಸಿ ಅರ್ಹ/ಅನರ್ಹ ಅರ್ಜಿಗಳನ್ನು ಪರಿಶೀಲಿಸಿ, ಪ್ರತ್ಯೇಕವಾಗಿ ಸಲ್ಲಿಸಲು ದಿನಾಂಕ:14-07-2022ರ ಈ ಕಚೇರಿ ಜ್ಞಾಪನ ಪತ್ರದಲ್ಲಿ ತಿಳಿಸಲಾಗಿರುತ್ತದೆ.

ಜಿಲ್ಲಾ ಉಪ ನಿರ್ದೇಶಕರುಗಳಿಂದ ಸ್ವೀಕೃತವಾದ ಅರ್ಜಿಗಳನ್ನು ಅರ್ಹ ಮತ್ತು ಅನರ್ಹ ಎಂದು ವಿಂಗಡಿಸಿ, ಪ್ರತ್ಯೇಕವಾಗಿ ಪ್ರಕಟಿಸಿ, ಆಕ್ಷೇಪಣೆಗಳನ್ನು ಆಹ್ವಾನಿಸಲಾಗುವುದು. ಸ್ವೀಕೃತವಾಗುವ ಆಕ್ಷೇಪಣೆಗಳನ್ನು ನಿಯಮಾನುಸಾರ ಪರಿಶೀಲಿಸಿ, ಪರಿಗಣಿಸಿ ಅರ್ಹಗೊಳಿಸಲಾದ ಅರ್ಜಿಗಳನ್ನು ಆದ್ಯತೆಯಡಿ ಪ್ರತ್ಯೇಕಿಸಿ ಅಂತಿಮಗೊಳಿಸಿ, ಪ್ರಕಟಿಸಲಾಗುವುದು. ಅಂತಿಮಗೊಳಿಸಲಾದ ಪಟ್ಟಿಯಲ್ಲಿರುವ ಉಪನ್ಯಾಸಕರಿಗೆ ದಿನಾಂಕ: 05-08-2022 ರಿಂದ ಕೋರಿಕೆ ವರ್ಗಾವಣೆ ಕೌನ್ಸಲಿಂಗ್ ಪ್ರಾರಂಭಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಪರಿಷ್ಕೃತ ವೇಳಾಪಟ್ಟಿಯನ್ನು ಪ್ರಕಟಿಸಿದೆ.

2.........

| ಕ್ರಮ ಸಂಖ್ಯೆ | ವಿಷಯ | ದಿನಾಂಕ |
|---|---|---|
| 1 | 2022-23ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಸಾಮಾನ್ಯ ಕೋರಿಕೆ ವರ್ಗಾವಣೆ ಕೋರಿ ಸಲ್ಲಿಸಲಾದ ಅರ್ಜಿಗಳಲ್ಲಿ ಅಪೂರ್ಣ ದಾಖಲೆ /ಮಾಹಿತಿ ಹೊಂದಿರುವ ಅರ್ಜಿಗಳನ್ನು ಜಿಲ್ಲಾ ಉಪ ನಿರ್ದೇಶಕರಿಗೆ ಹಿಂದಿರುಗಿಸಿದ ದಿನಾಂಕ: | 14-07-2022 |
| | ಸದರಿ ಅಪೂರ್ಣ ದಾಖಲೆ/ಮಾಹಿತಿ ಹೊಂದಿರುವ ವರ್ಗಾವಣೆ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ, ನಿರ್ದೇಶನಾಲಯಕ್ಕೆ ಸಲ್ಲಿಸಲು ನಿಗದಿಗೊಳಿಸಿದ ಕೊನೆಯ ದಿನಾಂಕ: | 22-07-2022 |
| 2 | ಸಾಮಾನ್ಯ ಕೋರಿಕೆ ವರ್ಗಾವಣೆಯಲ್ಲಿ ಪರಿಗಣಿಸುವಂತೆ ಕೋರಿ ಉಪನ್ಯಾಸಕರಿಂದ ಸ್ವೀಕೃತವಾದ ಒಟ್ಟು ಅರ್ಜಿಗಳಲ್ಲಿ ಅರ್ಹ ಮತ್ತು ಅನರ್ಹ ಎಂದು ಪರಿಗಣಿಸಲ್ಪಟ್ಟ ಉಪನ್ಯಾಸಕರ ತಾತ್ಕಾಲಿಕ ಪಟ್ಟಿಯನ್ನು ಪ್ರಕಟಿಸುವ ದಿನಾಂಕ: | 26-07-2022 |
| | ಸದರಿ ಪಟ್ಟಿಗೆ ಆಕ್ಷೇಪಣೆಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ ಮತ್ತು ಸಮಯ | 30-07-2022 (05-00 PM) |
| 3 | ಸ್ವೀಕೃತವಾದ ಆಕ್ಷೇಪಣೆಗಳನ್ನು ನಿಯಮಾನುಸಾರ ಪರಿಶೀಲಿಸಿ, ಪರಿಗಣಿಸಿ ಅಂತಿಮ ಪಟ್ಟಿ ಪ್ರಕಟಿಸುವ ದಿನಾಂಕ: | 02-08-2022 |
| 4 | ಅಂತಿಮ ಪಟ್ಟಿಯಲ್ಲಿ ಪರಿಗಣಿಸಲ್ಪಟ್ಟ ಅರ್ಹ ಉಪನ್ಯಾಸಕರಿಗೆ ವರ್ಗಾವಣೆ ಕೌನ್ಸಲಿಂಗ್ ಪ್ರಾರಂಭಿಸುವ ದಿನಾಂಕ: | 05-08-2022 @ 9 AM |
| 5 | ಪರಸ್ಪರ ಕೋರಿಕೆ ವರ್ಗಾವಣೆ | ಸಾಮಾನ್ಯ ಕೋರಿಕೆ ವರ್ಗಾವಣೆ ಪೂರ್ಣಗೊಂಡ ನಂತರ |

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

<u>ಪ್ರತಿಯನ್ನು</u>:

1. ಸರ್ಕಾರದ ಅಧೀನ ಕಾರ್ಯದರ್ಶಿ, ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ, ಪದವಿ ಪೂರ್ವ ಶಿಕ್ಷಣ, ಬಹುಮಹಡಿ ಕಟ್ಟಡ, ಬೆಂಗಳೂರು.
2. ನಿರ್ದೇಶಕರು / ಜಂಟಿ ನಿರ್ದೇಶಕರು (ಆಡಳಿತ) ಇವರ ಆಪ್ತಶಾಖೆಗೆ.
3. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ – ಅಗತ್ಯ ಕ್ರಮಕ್ಕಾಗಿ.
4. ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿಗಾಗಿ.
5. 2022-23ನೇ ಶೈಕ್ಷಣಿಕ ಸಾಲಿನ ಸಾಮಾನ್ಯ ಕೋರಿಕೆ ವರ್ಗಾವಣೆಗೆ ಅರ್ಜಿ ಸಲ್ಲಿಸಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರುಗಳಿಗೆ.
6. ಕಚೇರಿ/ಹೆಚ್ಚುವರಿ ಪ್ರತಿ.